ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಅರ್ಹ ಗೆಜೆಟೆಡ್ ಮ್ಯಾನೇಜರ್‌ಗಳಿಗೆ ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ:27.02.2019 ಹಾಗೂ ದಿನಾಂಕ:15.05.2019ರ ಸಂಖ್ಯೆ: ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ:25.07.2019ರ ಸಂಖ್ಯೆ: ಕಾಶಿಇ/26/ಮ್ಯಾಜೆಪ/ 2019-20ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ ಗೆಜೆಟೆಡ್ ಮ್ಯಾನೇಜರ್‌ಗಳ ಅಂತಿಮ ಜೇಷ್ಠತಾ ಪಟ್ಟಿ.
3. ದಿನಾಂಕ:20.01.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು .

** ** **

**ಪ್ರಸ್ತಾವನೆ:**

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಗೆಜೆಟೆಡ್ ಮ್ಯಾನೇಜರ್ ಹುದ್ದೆಯಿಂದ ಶೇಕಡ 100ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2)ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ ಗೆಜೆಟೆಡ್ ಮ್ಯಾನೇಜರ್‌ಗಳ ಅಂತಿಮ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಸಹಾಯಕ ನಿರ್ದೇಶಕ ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ:20.01.2022ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ಗೆಜೆಟೆಡ್ ಮ್ಯಾನೇಜರ್‌ಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಗೆಜೆಟೆಡ್ ಮ್ಯಾನೇಜರ್‌ಗಳ ವೃಂದದಿಂದ ಸಹಾಯಕ ನಿರ್ದೇಶಕರ ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ ಶ್ರೀ.ಧರ್ಮಪ್ಪ ಬಿ.ಎಸ್. ಗೆಜೆಟೆಡ್ ಮ್ಯಾನೇಜರ್ ಇವರಿಗೆ ಸಹಾಯಕ ನಿರ್ದೇಶಕರಾಗಿ ಸ್ಥಾನಪನ್ನ ಬಡ್ತಿ ನೀಡಿ, ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಾಶಿಇ/36/ಸ.ನಿ/ಬಡ್ತಿ/2021-22/ಬಸ್ಥಾವಿ, ಬೆಂಗಳೂರು, ದಿನಾಂಕ:12.07.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಗೆಜೆಟೆಡ್ ಮ್ಯಾನೇಜರ್‌ಗೆ ವೇತನ ಶ್ರೇಣಿ ರೂ43100-1100-46400-1250-53900-1450-62600-1650-72500-1900-83900ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸಹಾಯಕ ನಿರ್ದೇಶಕ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ, ಅವರ ಹೆಸರಿನ ಮುಂದೆ ಇರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

## ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)

| ಕ್ರ.ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | 2 | 3 | 4 | 5 |
| 1 | ಧರ್ಮಪ್ಪ ಬಿ.ಎಸ್ | ಸರ್ಕಾರಿ ಕಲಾ ಕಾಲೇಜು, ಹಾಸನ | ಕೇಂದ್ರ ಕಛೇರಿ, ಬೆಂಗಳೂರು. | ಶ್ರೀಮತಿ.ಮೇರಿ ಎಂ ಇವರ ಬಡ್ತಿಯಿಂದ ತೆರವಾದ ಹುದ್ದೆಗೆ ಎದುರಾಗಿ |

ಸೂಚನೆಗಳು:

1. ಸರ್ಕಾರಿ ಕಲಾ ಕಾಲೇಜು, ಹಾಸನ ಇಲ್ಲಿನ ಪ್ರಾಂಶುಪಾಲರು ಈ ಆದೇಶವನ್ನು ವೆಬ್‌ಸೈಟ್‌ನಿಂದ ಪಡೆದು ಬಡ್ತಿ ಹೊಂದಿದವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸತಕ್ಕದ್ದು.
2. ಬಡ್ತಿ ಹೊಂದಿದವರು ಸ್ಥಳನಿಯುಕ್ತಿಗೊಳಿಸಲಾದ ಕಛೇರಿ/ ಕಾಲೇಜುಗಳಲ್ಲಿ ಈ ಆದೇಶ ಪ್ರಕಟಗೊಂಡ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಪಡಿಸಲಾಗುವುದು.
3. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.
4. ಬಡ್ತಿ ಹೊಂದಿರುವ ಶ್ರೀ.ಧರ್ಮಪ್ಪ ಬಿ.ಎಸ್. ಇವರು ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

*(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)*

12/07/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ:

1) ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ/ ಮೇಲ್ಕಂಡ ಸರ್ಕಾರಿ ಕಲಾ ಕಾಲೇಜು, ಹಾಸನ ಇಲ್ಲಿನ ಪ್ರಾಂಶುಪಾಲರಿಗೆ –ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ಗೆಜೆಟೆಡ್ ಮ್ಯಾನೇಜರ್‌ಗೆ (ಸಂಬಂಧಪಟ್ಟ ಪ್ರಾಂಶುಪಾಲರ ಮೂಲಕ)
3) ಮ್ಯಾನೇಜರ್/ ಅಧೀಕ್ಷಕರು, ಸೇವಾ ವಿಭಾಗ/ ವರ್ಗಾವಣೆ & ನಿಯೋಜನೆ ವಿಭಾಗ ಕೇಂದ್ರ ಕಛೇರಿ, ಬೆಂಗಳೂರು –ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು –ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ ಎಲ್ಲಾ ವಿಭಾಗಗಳ ಅಧೀಕ್ಷಕರುಗಳು –ಮಾಹಿತಿಗಾಗಿ.